# ಕರ್ನಾಟಕ ವಿಧಾನ ಪರಿಷತ್

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 956 (1127) |
| ಮಾನ್ಯ ಸದಸ್ಯರ ಹೆಸರು | : | ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : | 21-09-2021 |
| ಉತ್ತರಿಸುವ ಸಚಿವರು | : | ಪೌರಾಡಳಿತ, ಸಣ್ಣ ಕೈಗಾರಿಕೆ, ಸಾರ್ವಜನಿಕ ವಲಯ ಉದ್ಯಮಗಳ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | 2015 ರಿಂದ 2021 ರವರೆಗೆ ಸ್ವಚ್ಛ ಭಾರತ್ ಯೋಜನೆಯಡಿ ಬಿಡುಗಡೆಯಾದ ಅನುದಾನದ ಮೊತ್ತವೆಷ್ಟು; | ಕೇಂದ್ರ ಸರ್ಕಾರವು ಜಾರಿಗೊಳಿಸಿರುವ ಸ್ವಚ್ಛ ಭಾರತ ಮಿಷನ್ (ನಗರ) ಯೋಜನೆಯಡಿ 2015 ರಿಂದ 2021 ರವರೆಗೆ ವಿವಿಧ ಘಟಕಗಳಿಗಾಗಿ ಒಟ್ಟು ರೂ. 721.36 ಕೋಟಿಗಳ ಅನುದಾನ ಬಿಡುಗಡೆಯಾಗಿರುತ್ತದೆ. |
| ಆ) | ಈ ಅನುದಾನದಲ್ಲಿ ಯಾವ ಯಾವ ರೀತಿಯ ಯೋಜನೆಗಳ ಮೂಲಕ ಅನುದಾನವನ್ನು ವ್ಯಯ ಮಾಡಲಾಗುತ್ತಿದೆ; (ಸಂಪೂರ್ಣವಾಗಿ ಯೋಜನೆವಾರು ಮಾಹಿತಿಯನ್ನು ನೀಡುವುದು) | ಸ್ವಚ್ಛ ಭಾರತ ಮಿಷನ್ ಅಡಿ ಕೈಗೊಂಡಿರುವ ವಿವಿಧ ಘಟಕಗಳ ವಿವರಗಳನ್ನು **ಅನುಬಂಧ-1** ರಲ್ಲಿ ಲಗತ್ತಿಸಿದೆ. |
| ಇ) | ಸ್ವಚ್ಛ ಭಾರತ್ ಯೋಜನೆಯಡಿ ಐ.ಇ.ಸಿ. ಕಾರ್ಯಕ್ರಮಗಳನ್ನು ಕೈಗೊಳ್ಳಲು ಮೀಸಲಿಸಿರುವ ಅನುದಾನವೆಷ್ಟು; (ವಿವರ ನೀಡುವುದು) | ಐ.ಇ.ಸಿ ಕಾರ್ಯಕ್ರಮಗಳನ್ನು ಕೈಗೊಳ್ಳಲು ಕೇಂದ್ರ ಹಾಗೂ ರಾಜ್ಯ ಸರ್ಕಾರಗಳ ಪಾಲು ಸೇರಿ ಒಟ್ಟು ರೂ. 138.25 ಕೋಟಿಗಳನ್ನು ಮೀಸಲಿರಿಸಲಾಗಿದೆ. |
| ಈ | ಮೀಸಲಿಸಿರುವ ಅನುದಾನವನ್ನು ವ್ಯಯ ಮಾಡಲು ವಿಫಲರಾದಂತಹ ಅಧಿಕಾರಿಗಳ ವಿರುದ್ಧ ಸರ್ಕಾರ ಯಾವ ರೀತಿಯ ಕ್ರಮ ಕೈಗೊಳ್ಳಲಾಗಿದೆ? | ನಗರ ಸ್ಥಳೀಯ ಸಂಸ್ಥೆಗಳಲ್ಲಿ ಕೋವಿಡ್ ಪರಿಸ್ಥಿತಿಯಿಂದಾಗಿ ಸಾಮೂಹಿಕ ಸಭೆಗಳು, ಒಟ್ಟುಗೂಡುವಿಕೆಯಲ್ಲಿ ನಿರ್ಬಂಧವಿದ್ದುದರಿಂದ ಪೂರ್ಣ ಪ್ರಮಾಣದಲ್ಲಿ ಐ.ಇ.ಸಿ ಚಟುವಟಿಕೆಗಳನ್ನು ಹಮ್ಮಿಕೊಳ್ಳಲು ಸಾಧ್ಯವಾಗಿರುವುದಿಲ್ಲ. ಹಾಲಿ ಎಲ್ಲಾ ನ.ಸ್ಥ.ಸಂ.ಗಳಲ್ಲಿ ಐ.ಇ.ಸಿ ಚಟುವಟಿಕೆಗಳನ್ನು ಪೂರ್ಣ ಪ್ರಮಾಣದಲ್ಲಿ ಹಮ್ಮಿಕೊಳ್ಳಲು ಕ್ರಮವಹಿಸಲಾಗುತ್ತಿದೆ ಹಾಗೂ ಅನುದಾನವನ್ನು ವಿನಿಯೋಗಿಸಲು ಕಟ್ಟುನಿಟ್ಟಿನ ಸೂಚನೆಗಳನ್ನು ನೀಡಲಾಗಿದೆ. |

ಸಂಖ್ಯೆ: ನಅಇ 164 ಸಿಎಸ್ಎಸ್ 2021

[ಎನ್. ನಾಗರಾಜ್ (ಎಂ.ಟಿ.ಬಿ.)]
ಪೌರಾಡಳಿತ, ಸಣ್ಣ ಕೈಗಾರಿಕೆ, ಸಾರ್ವಜನಿಕ ವಲಯ
ಉದ್ಯಮಗಳ ಸಚಿವರು.

ಅನುಬಂಧ-1

| ಕ್ರ. ಸಂ. | ಎಸ್.ಬಿ.ಎಂ. (ನಗರ) ಘಟಕಗಳು | ಅನುದಾನ ಬಳಕೆ |
|---|---|---|
| 1. | ವೈಯಕ್ತಿಕ ಶೌಚಾಲಯಗಳ ನಿರ್ಮಾಣ | ಶೌಚಾಲಯರಹಿತ ಮನೆಗಳಿಗೆ ವೈಯಕ್ತಿಕ ಶೌಚಾಲಯ ನಿರ್ಮಾಣ ಹಾಗೂ ಅನೈರ್ಮಲ್ಯ ಶೌಚಾಲಯಗಳನ್ನು ನೈರ್ಮಲ್ಯ ಶೌಚಾಲಯಗಳಾಗಿ ಉನ್ನತೀಕರಿಸುವುದು. |
| 2. | ಸಮುದಾಯ ಶೌಚಾಲಯಗಳ ನಿರ್ಮಾಣ | ವೈಯಕ್ತಿಕ ಶೌಚಾಲಯಗಳನ್ನು ನಿರ್ಮಿಸಲು ಜಾಗವಿಲ್ಲದ ಮನೆಗಳಿಗೆ ಸಮುದಾಯ ಶೌಚಾಲಯಗಳ ನಿರ್ಮಾಣ. |
| 3. | ಸಾರ್ವಜನಿಕ ಶೌಚಾಲಯಗಳು ನಿರ್ಮಾಣ | ಪಟ್ಟಣಕ್ಕೆ ದಿನನಿತ್ಯ ಬಂದು ಹೋಗುವ ಜನರಿಗಾಗಿ ಸಾರ್ವಜನಿಕ ಶೌಚಾಲಯಗಳ ನಿರ್ಮಾಣ. |
| 4. | ಘನತ್ಯಾಜ್ಯ ನಿರ್ವಹಣೆ | ನಗರ ಸ್ಥಳೀಯ ಸಂಸ್ಥೆಗಳ ವಿಧ ಹಾಗೂ ಅವಶ್ಯಕತೆಗನುಗುಣವಾಗಿ ಮೂಲದಲ್ಲಿಯೇ ತ್ಯಾಜ್ಯ ವಿಂಗಡಣೆ, ಮನೆ-ಮನೆಗಳಿಂದ, ವಾಣಿಜ್ಯ ಪ್ರದೇಶಗಳಿಂದ ಹಾಗೂ ಬೃಹತ್ ತ್ಯಾಜ್ಯ ಉತ್ಪಾದಕರಿಂದ ತ್ಯಾಜ್ಯ ಸಂಗ್ರಹಣೆ, ಒಣ ತ್ಯಾಜ್ಯ ಸಂಗ್ರಹಣಾ ಕೇಂದ್ರಗಳ ಸ್ಥಾಪನೆ, ಟ್ರಾನ್ಸ್‌ಫರ್ ಸ್ಟೇಷನ್‌ಗಳ ನಿರ್ಮಾಣ, ದ್ವಿತೀಯ ಹಂತದ ಸಾಗಣೆ, ವೈಜ್ಞಾನಿಕ ತ್ಯಾಜ್ಯ ಸಂಸ್ಕರಣೆ ಹಾಗು ವಿಲೇವಾರಿ ಇತ್ಯಾದಿಗಳ ಕಾರ್ಯಗಳನ್ನು ಕೈಗೊಳ್ಳಲು ಅಗತ್ಯವಿರುವ ಮೂಲಸೌಕರ್ಯಗಳನ್ನು ಒದಗಿಸಲು. |
| 5. | ಸಾರ್ವಜನಿಕರಲ್ಲಿ ತಿಳುವಳಿಕೆ ಹಾಗು ಅರಿವು ಮೂಡಿಸುವುದು. | ನಗರ ಸ್ಥಳೀಯ ಸಂಸ್ಥೆಗಳ ಹಂತದಲ್ಲಿ ಸ್ವಚ್ಛ ಭಾರತ್ ಮಿಷನ್ (ನಗರ) ಯೋಜನೆಯ ಧ್ಯೇಯೋದ್ದೇಶಗಳ ಬಗ್ಗೆ ವಿವಿಧ ಕಾರ್ಯಕ್ರಮಗಳ ಮೂಲಕ ಸಾರ್ವಜನಿಕರಲ್ಲಿ ಅರಿವು ಮೂಡಿಸುವುದು. |
| 6. | ಬಲವರ್ಧನೆ ಹಾಗು ಆಡಳಿತ & ಕಛೇರಿ ವೆಚ್ಚಗಳು | ▪ ಸ್ವಚ್ಛ ಭಾರತ್ ಮಿಷನ್ (ನಗರ) ಯೋಜನೆಯ ಬಗ್ಗೆ ನಗರ ಸ್ಥಳೀಯ ಸಂಸ್ಥೆಗಳ ಅಧಿಕಾರಿ ಮತ್ತು ಜನಪ್ರತಿನಿಧಿಗಳಿಗೆ ಕಾರ್ಯಾಗಾರಗಳು, ತರಬೇತಿ ಆಯೋಜನೆ.<br>▪ ಸಮಗ್ರ ಘನತ್ಯಾಜ್ಯ ವಸ್ತು ನಿರ್ವಹಣೆ ಡಿ.ಪಿ.ಆರ್.ಗಳನ್ನು ತಯಾರಿಸಲು.<br>▪ ಸ್ವಚ್ಛ ಭಾರತ್ ಸ್ಟೇಟ್ ಮಿಷನ್ ಡೈರೆಕ್ಟೊರೇಟ್ ನಲ್ಲಿ ಹೊರಗುತ್ತಿಗೆ ಮೂಲಕ ಕಾರ್ಯನಿರ್ವಹಿಸುತ್ತಿರುವ ವಿಷಯ ಪರಿಣತರು ಹಾಗೂ ಸಿಬ್ಬಂದಿಗಳ ವೇತನ ಪಾವತಿ.<br>▪ ಸ್ವಚ್ಛ ಭಾರತ್ ಮಿಷನ್ (ನಗರ) ಯೋಜನೆ ಅನುಷ್ಠಾನ ಕುರಿತು ಪ್ರಗತಿ ಪರಿಶೀಲನಾ ಸಭೆ ಆಯೋಜನೆ. |